ಮೊಕದ್ದಮೆಯನ್ನು ಕೃಷಿ ಉತ್ವನ್ನ ಮಾರುಕಟ್ಟೆ ಸಮಿತಿ, ಮಂಗಳೂರು ದಾಖಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) 40 ಮಂದಿ ಪೇಟೆ ಕಾರ್ಯಕರ್ತರ ವಿರುದ್ಧ ಮಂಗಳೂರಿನ ಸ್ಥಳೀಯ ನ್ಯಾಯಾಲಯದಲ್ಲಿ ಹೂಡಲಾಗಿದ್ದ ಕೇಸುಗಳನ್ನು ಹಿಂದಕ್ಕೆ ತೆಗೆದುಕೊಳ್ಳುವ ಬಗ್ಗೆ ಅನುಮತಿ ಕೋರಿ ಕೃಷಿ ಮಾರಾಟ ಇಲಾಖೆಯು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಈ ಬಗ್ಗೆ ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳ ಅಭಿಪ್ರಾಯ ಪಡೆಯಲಾಗಿದ್ದು, ಸದರಿ ಅಭಿಪ್ರಾಯದ ಹಿನ್ನೆಲೆಯಲ್ಲಿ, ಕ್ರಿಮಿನಲ್ ಮೊಕದ್ದಮೆ ಹಿಂಪಡೆಯುವ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ದಿ: 23.3.2009ರಲ್ಲಿ ಮಾರುಕಟ್ಟೆ ಸಮಿತಿಯು 77 ಪೇಟೆ ಕಾರ್ಯಕರ್ತರ ವಿರುದ್ಧ ಸ್ಥಳೀಯ ಮಂಗಳೂರು ನ್ಯಾಯಾಲಯದಲ್ಲಿ ಕೇಸು ದಾಖಲಿಸಿದ್ದರೆ ಔಚಿತ್ಯವನ್ನು ಪ್ರಶ್ನಿಸಿ 77 ಜನರ ಪೈಕಿ 30 ಮಂದಿ ವರ್ತಕರು ಮಾನ್ಯ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಕ್ರಿಮಿನಲ್ ರಿವಿಷನ್ ಪಿಟಿಷನ್ ದಾಖಲಿಸಿರುತ್ತಾರೆ. ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ವಿಚಾರಣೆಯು ಪ್ರಗತಿಯಲ್ಲಿರುತ್ತದೆ.

ಇ) ಸಮಿತಿಯು ಸ್ಥಳೀಯ ಮಂಗಳೂರು ನ್ಯಾಯಾಲಯದಲ್ಲಿ ಕೇಸು ದಾಖಲಿಸಿರುವುದು ನ್ಯಾಯಸಮ್ಮತ ಕ್ರಮವಲ್ಲವೆಂದು ಉಚ್ಚ ನ್ಯಾಯಾಲಯದಲ್ಲಿ ವರ್ತಕರು ದಾವೆಯನ್ನು ಹೂಡಿರುತ್ತಾರೆ. ಉಚ್ಚ ನ್ಯಾಯಾಲಯದ ತೀರ್ಮ ಬಂದ ನಂತರ, ನಿಯಮಾನುಸಾರ ಸಂಬಂಧಪಟ್ಟವರ ವಿರುದ್ಧ ಹಾಗೂ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಲಾಗುವುದು.

900 ಶ್ರೀ ಹ್ಯಾರೀಸ್ ಎನ್.ಎ. (ಶಾಂತಿನಗರ ಕ್ಷೇತ್ರ): ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಖಾಲಿ ಇರುವ ಎ, ಬಿ, ಸಿ, ವರ್ಗಗಳ ಹುದ್ದೆಗಳ ಸಂಖ್ಯೆ ಎಷ್ಟು? (ಅವುಗಳನ್ನು ಭರ್ತಿ ಮಾಡಲು ಸರ್ಕಾರದ ಕ್ರಮಗಳೇನು)

ಆ) ವಿವಿಧ ಅಭಿವೃದ್ಧಿಪರ ಯೋಜನೆಗಳ ಜಾರಿಯಲ್ಲಿ ಸಿಬ್ಬಂದಿ ವರ್ಗದವರ ಅವಶ್ಯಕತೆಯು ಪ್ರಾಮುಖ್ಯವಾಗಿರುವುದರಿಂದ ಸಕಾಲದಲ್ಲಿ ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ಮುಂದಾಗುವುದೇ?

ಶ್ರೀ ಪಿ.ಎಂ. ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು):

ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವ್ಯಾಪ್ತಿಗೊಳಪಡುವ ಈ ಕೆಳಕಂಡ ನಿರ್ದೇಶನಾಲಯಗಳಲ್ಲಿ ಎ, ಬಿ, ಸಿ ವರ್ಗಗಳ ಒಟ್ಟು 931 ಹುದ್ದೆಗಳು ಖಾಲಿ ಇರುತ್ತವೆ.

ನಿರ್ದೇಶನಾಲಯದ ಹೆಸರು	ವೃಂದ			
	ಎ ವರ್ಗ	ಬಿ ವರ್ಗ	ಸಿ ವರ್ಗ	ಒಟ್ಟು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ	18	35	820	873
ಅಂಗವಿಕಲರ ಮತ್ತು ಹಿರಿಯ ನಾಗರಿಕರ ಕಲ್ಯಾಣ ಇಲಾಖೆ	–	4	54	58
ಒಟ್ಟು	**18**	**39**	**874**	**931**

ಮೇಲ್ಕಂಡ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳನ್ನು ಅನುಬಂಧ–'ಎ' ಹಾಗೂ 'ಬಿ' ಗಳಲ್ಲಿ ಒದಗಿಸಿದೆ.

ಆ) ಈಗಾಗಲೇ ಕ್ರಮವಹಿಸುತ್ತಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಅನುಬಂಧ–ಎ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ನಿರ್ದೇಶನಾಲಯ

ಕ್ರ. ಸಂ.	ವರ್ಗ	ಹುದ್ದೆಯ ಪದನಾಮ	ಖಾಲಿ ಇರುವ ಹುದ್ದೆಗಳ ವಿವರ	ಭರ್ತಿ ಮಾಡಲು ಕೈಗೊಂಡಿರುವ ಕ್ರಮ
1	ಗ್ರೂಪ್ ಎ, ಕಿರಿಯ ಶ್ರೇಣಿ	ಸಹಾಯಕ ನಿರ್ದೇಶಕರು	18	ಇಲಾಖೆಯಲ್ಲಿ ಖಾಲಿಯಿರುವ ನೇರ ನೇಮಕಾತಿ ಹುದ್ದೆಗಳಲ್ಲಿ 50% ರಷ್ಟು ಹುದ್ದೆಗಳನ್ನು 2008–2009ನೇ ಸಾಲಿನಲ್ಲಿ ಹಾಗೂ 50%ರಷ್ಟು ಹುದ್ದೆಗಳನ್ನು 2009–2010ನೇ ಸಾಲಿನಲ್ಲಿ ತುಂಬಲು ಆರ್ಥಿಕ ಇಲಾಖೆ ಸಹಮತಿ ನೀಡಿದ್ದು, ಸದರಿ ಹುದ್ದೆಗಳನ್ನು ತುಂಬುವ ಪ್ರಕ್ರಿಯೆ ಚಾಲನೆಯಲ್ಲಿದೆ.
2	ಗ್ರೂಪ್ ಬಿ	ಪರಿವೀಕ್ಷಣಾಧಿಕಾರಿ ದರ್ಜೆ–1	35	ಸರ್ಕಾರದ ಪತ್ರ 207 ಎಸ್‌ಜೆಡಿ 2007, ದಿನಾಂಕ 18.8.2008ರಲ್ಲಿ 35 ಹುದ್ದೆಗಳನ್ನು ನೇರ ನೇಮಕಾತಿಯ ಮೂಲಕ ಭರ್ತಿ ಮಾಡಲು ಕರ್ನಾಟಕ ಲೋಕ ಸೇವಾ ಆಯೋಗವನ್ನು ಕೋರಲಾಗಿರುತ್ತದೆ.
3	ಗ್ರೂಪ್ ಸಿ	1. ಪರಿವೀಕ್ಷಣಾಧಿಕಾರಿ ದರ್ಜೆ–2	108	54 ಹುದ್ದೆಗಳನ್ನು ನೇರ ನೇಮಕಾತಿಯ ಮೂಲಕ ತುಂಬಲು ಕ್ರಮವಹಿಸಲಾಗುವುದು

ಕ್ರ ಸಂ.	ವರ್ಗ	ಹುದ್ದೆಯ ಪದನಾಮ	ಖಾಲಿ ಇರುವ ಹುದ್ದೆಗಳ ವಿವರ	ಭರ್ತಿ ಮಾಡಲು ಕೈಗೊಂಡಿರುವ ಕ್ರಮ
		2. ಪ್ರಥಮ ದರ್ಜೆ ಸಹಾಯಕರು	112	50 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ನೇರ ನೇಮಕಾತಿಯ ಮೂಲಕ ತುಂಬಲು ಕರ್ನಾಟಕ ಲೋಕ ಸೇವಾ ಆಯೋಗವು ಆಯ್ಕೆ ಮಾಡಿ ಪಟ್ಟಿ ನೀಡಿದ್ದು, ಅವುಗಳನ್ನು ತುಂಬುವ ಪ್ರಕ್ರಿಯೆ ಪ್ರಾರಂಭವಾಗಿದೆ. ಉಳಿದ ಹುದ್ದೆಗಳನ್ನು 2009-2010ನೇ ಸಾಲಿನಲ್ಲಿ ತುಂಬಲು ಕ್ರಮವಹಿಸಲಾಗುವುದು
		3. ಮೇಲ್ವಿಚಾರಕಿಯರು	502	461 ಹುದ್ದೆಗಳನ್ನು ತುಂಬುವ ಬಗ್ಗೆ ಆಯ್ಕೆ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ.
		4. ದ್ವಿತೀಯ ದರ್ಜೆ ಸಹಾಯಕರು	98	ಖಾಲಿಯಿರುವ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡುವ ಬಗೆಗಿನ ಪ್ರಸ್ತಾವನೆಯನ್ನು ನಿರ್ದೇಶನಾಲಯದ ಹಂತದಲ್ಲಿ ಪರಿಶೀಲಿಸಲಾಗುತ್ತಿದೆ.

ಅನುಬಂಧ–ಬಿ

ಅಂಗವಿಕಲರ ಮತ್ತು ಹಿರಿಯ ನಾಗರಿಕರ ಕಲ್ಯಾಣ ನಿರ್ದೇಶನಾಲಯ

ಅಂಗವಿಕಲರ ಮತ್ತು ಹಿರಿಯ ನಾಗರಿಕರ ಕಲ್ಯಾಣ ಇಲಾಖೆಯಲ್ಲಿ ಈ ಕೆಳಕಂಡ ಒಟ್ಟು 58 ಹುದ್ದೆಗಳು ಖಾಲಿ ಇರುತ್ತವೆ.

ಗ್ರೂಪ್–ಎ	– ಇಲ್ಲ
ಗ್ರೂಪ್–ಬಿ	– 04
ಗ್ರೂಪ್–ಸಿ	– 54

ಮೇಲ್ಕಂಡ ಹುದ್ದೆಗಳನ್ನು ಭರ್ತಿ ಮಾಡಲು ನಿರ್ದೇಶನಾಲಯದ ಹಂತದಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ.

901 ಶ್ರೀ ಜಯಚಂದ್ರ ಟಿ.ಬಿ. (ಶಿರಾ): ಮಾನ್ಯ ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ರಾಜ್ಯದಲ್ಲಿ ಸಹಕಾರಿ ಸಂಘ ಸಂಸ್ಥೆಗಳು ಮತ್ತು ಖಾಸಗಿ ವಲಯದಲ್ಲಿರುವ ಸರ್ಕಾರಿ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು;

ಆ) ಖಾಸಗಿಯವರು ಸ್ವಂತ ಅಂಗಡಿಯ ಜೊತೆಯಲ್ಲಿ ಸರ್ಕಾರಿ ನ್ಯಾಯಬೆಲೆ ಅಂಗಡಿಯನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಇದರಿಂದ ಪಡಿತರದಾರರಿಗೆ ತೊಂದರೆಯಾಗುವುದಿಲ್ಲವೆ;

ಈ) ಹಲವು ವರ್ಷಗಳಿಂದ ನಡೆಯುತ್ತಿರುವ ಈ ವ್ಯವಸ್ಥೆಯನ್ನು ಬದಲಾಯಿಸಲು ಸರ್ಕಾರದ ಕ್ರಮವೇನು?